**ದಿನಾಂಕಃ 23-02-2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಶ್ರೀ ಹೆಚ್.ಎಂ.ಬಿ., ವಾದಿಯಪರ ವಕೀಲರಿಂದ**

ನಾನು ಈ ದಾವೆಯಲ್ಲಿ ವಾದಿ ಇದ್ದು, ಈ ದಿನ ನಾನು ನ್ಯಾಯಾಲಯದಲ್ಲಿ ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಸಲ್ಲಿಸಿದ್ದೇನೆ. ಅದರಲ್ಲಿ ಬರೆದಿರುವ ಎಲ್ಲಾ ವಿಷಯಗಳು ಸತ್ಯವಾಗಿವೆ ಹಾಗೂ ಅದರಲ್ಲಿರುವ ಸಹಿಗಳು ನನ್ನವೇ ಆಗಿರುತ್ತವೆ.

ನಾನು ಈ ದಾವೆಯಲ್ಲಿ ಹಾಜರುಪಡಿಸಿದ ದಾಖಲೆಗಳನ್ನು ನೋಡಿದರೆ ಗುರುತಿಸುತ್ತೇನೆ.

ಅಸಲು ದಾವಾ ಸಂಖ್ಯೆಃ 186/2016 ರ ರಾಜಿ ಡಿಕ್ರಿಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು **ನಿಪಿ-1** ಎಂದು, ಸದ್ರಿ ದಾವೆಯಲ್ಲಿ ಸಲ್ಲಿಸಿದ ರಾಜಿ ಅರ್ಜಿಯ ದೃಢೀಕೃತ ನಕಲನ್ನು **ನಿಪಿ-2** ಎಂದು, ದಿನಾಂಕಃ 20-01-2021 ರಂದು 1 ನೇ ಪ್ರತಿವಾದಿಯಾದ ಹನುಮಂತಪ್ಪ ಮೈತಾಬಅಲಿ ಎನ್ನುವವರಿಗೆ ಜಮೀನು ಮಾರಾಟ ಮಾಡಿದ ಬಗ್ಗೆ ನೊಂದಾಯಿತ ಕ್ರಯ ಪತ್ರದ ದೃಢೀಕೃತ ನಕಲನ್ನು **ನಿಪಿ-3** ಎಂದು, ದಿನಾಂಕಃ03-09-2025 ರಂದು ಉಪ ನೊಂದಣಾಧಿಕಾರಿ, ಹಾವೇರಿ ಇವರು ನೀಡಿರುವ ಹಿಂಬರಹವನ್ನು **ನಿಪಿ-4** ಎಂದು ಗುರುತಿಸಲಾಯಿತು.

(ಮುಂದುವರೆದ ಮುಖ್ಯ ವಿಚಾರಣೆಗೆ ವಾದಿ ಪರ ವಕೀಲರು ಕಾಲಾವಕಾಶ ಕೋರಿದ್ದು, ನೀಡಲಾಯಿತು.)
(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ.)

ಓ ಹೇ ಕೇ ಸರಿ ಇದೆ.

-ಸಹಿ-

1 ನೇ ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ. ಹಾವೇರಿ.